# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 228 |
| ಸದಸ್ಯರ ಹೆಸರು | : | ಶ್ರೀಎಂ.ನಾಗರಾಜು<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 13.02.2024 |
| ಉತ್ತರಿಸುವ ಸಚಿವರು | : | ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು. |

| ಕ್ರ. ಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ) | ಬೆಂಗಳೂರಿನ ಪೀಣ್ಯ ಕೈಗಾರಿಕಾ ಪ್ರದೇಶದಲ್ಲಿ ಮೂಲಭೂತ ಸೌಲಭ್ಯಗಳಿಲ್ಲದೆ ಕೈಗಾರಿಕೆಗಳ ದೈನಂದಿನ ಕಾರ್ಯಾಚರಣೆಗೆ ಅಡಚಣೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಗಮನಕ್ಕೆ ಬಂದಿದೆ. |
| ಆ) | ಕಳೆದ ಅಧಿವೇಶನದಲ್ಲಿ ಪೀಣ್ಯ 1ನೇ ಹಂತ ಮತ್ತು ಪೀಣ್ಯ 4ನೇ ಫೇಸ್ ಕಾಮಗಾರಿಗಳನ್ನು ರೂ.100.00 ಕೋಟಿ ವೆಚ್ಚದಲ್ಲಿ ಚರಂಡಿ ಕಲ್ವರ್ಟ್ ಸೇತುವೆಗಳ ಕಾಮಗಾರಿ ಮತ್ತು ಇನ್ನಿತರ ಮೂಲಭೂತ ಸೌಲಭ್ಯಗಳನ್ನು ಉನ್ನತೀಕರಣಗೊಳಿಸುವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು ಎಂದು ಸರ್ಕಾರವು ಭರವಸೆ ನೀಡಿದ್ದು ಕಾಮಗಾರಿಗಳನ್ನು ಪ್ರಾರಂಭಿಸಲಾಗಿದೆಯೇ; ಪ್ರಾರಂಭಿಸಿದ್ದಲ್ಲಿ, ಆ ಕಾಮಗಾರಿಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು; | ಪೀಣ್ಯ 1ನೇ ಹಂತ ಮತ್ತು ಪೀಣ್ಯ 4ನೇ ಫೇಸ್ ಕಾಮಗಾರಿಗಳನ್ನು ರೂ.100.00 ಕೋಟಿ ವೆಚ್ಚದಲ್ಲಿ ಚರಂಡಿ, ಕಲ್ವರ್ಟ್, ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದ್ದು, ಪೀಣ್ಯ 4ನೇ ಫೇಸ್‌ನ ಕಾಮಗಾರಿಯನ್ನು ದಿ: 01.12.2023 ರಂದು ಪ್ರಾರಂಭಿಸಲಾಗಿರುತ್ತದೆ. ಕಾಮಗಾರಿಯನ್ನು ಪೂರ್ಣಗೊಳಿಸಲು 11 ತಿಂಗಳ ಅವಧಿಯನ್ನು ನೀಡಲಾಗಿರುತ್ತದೆ.<br><br>ಪೀಣ್ಯ 1ನೇ ಹಂತದ ಕಾಮಗಾರಿಯನ್ನು ಪ್ರಾರಂಭಿಸುವ ಸಲುವಾಗಿ ಗುತ್ತಿಗೆದಾರರಿಗೆ ಒಪ್ಪಂದ ಪತ್ರಕ್ಕೆ ಸಹಿ ಹಾಕಲು ಪತ್ರವನ್ನು ಬರೆಯಲಾಗಿರುತ್ತದೆ. |
| ಇ) | ಕಾಮಗಾರಿಗಳನ್ನು ಪ್ರಾರಂಭಿಸದಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು ಮತ್ತು ಯಾವಾಗ ಈ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು; | ಕಾಮಗಾರಿಗಳ ಪ್ರಕ್ರಿಯೆ ಈಗಾಗಲೆ ಪ್ರಾರಂಭವಾಗಿರುತ್ತದೆ. |
| ಈ) | 2013ನೇ ಸಾಲಿನಲ್ಲಿ ಸರ್ಕಾರವು ಎಲೆಕ್ಟ್ರಾನಿಕ್ ಸಿಟಿ ಕೈಗಾರಿಕಾ ಪ್ರದೇಶಕ್ಕೆ ಇಎಲ್‌ಸಿಐಟಿಎ ಎಂಬ ಪ್ರಾಧಿಕಾರ ಸ್ಥಾಪಿಸಿದ್ದು, ಹಾಗೂ ಪೀಣ್ಯ ಕೈಗಾರಿಕಾ ಪ್ರದೇಶ 1970ನೇ ಸಾಲಿನಲ್ಲಿ ಸ್ಥಾಪಿಸಲಾಗಿದ್ದು, ಈವರೆವಿಗೂ ಈ ಪ್ರದೇಶಕ್ಕೆ ಪ್ರಾಧಿಕಾರ ರಚನೆ ಮಾಡದಿರಲು ಕಾರಣಗಳೇನು; (ವಿವರ ನೀಡುವುದು) | ಪೀಣ್ಯ ಕೈಗಾರಿಕಾ ಟೌನ್ ಶಿಪ್ ಅನ್ನು ಸ್ಥಾಪಿಸುವುದಾಗಿ 2021-22ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದ್ದು, ಅಪರ ಮುಖ್ಯ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ರವರ ಅಧ್ಯಕ್ಷತೆಯಲ್ಲಿ ಸಮಿತಿಯೊಂದನ್ನು ರಚಿಸಿ ವರದಿ ಪಡೆಯಲಾಗಿರುತ್ತದೆ.<br><br>ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ – KIADB ಮತ್ತು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ – KSSIDC ಸಂಸ್ಥೆಗಳು ಪೀಣ್ಯದಲ್ಲಿ ಅಭಿವೃದ್ಧಿಪಡಿಸಿರುವ ಕೈಗಾರಿಕಾ ಪ್ರದೇಶ ಮತ್ತು ವಸಾಹತುಗಳ ಒಟ್ಟು ವಿಸ್ತೀರ್ಣ 1786.5 ಎಕರೆ ವ್ಯಾಪ್ತಿಯನ್ನು "ಪೀಣ್ಯ ಕೈಗಾರಿಕಾ ಟೌನ್ ಶಿಪ್ ಪ್ರಾಧಿಕಾರ" ವಾಗಿ ಸ್ಥಾಪಿಸಲು ಮುನ್ಸಿಪಲ್ ಕಾಯ್ದೆ / ಬಿಬಿಎಂಪಿ ಕಾಯ್ದೆಗೆ ತಿದ್ದುಪಡಿ ಮಾಡುವ ಅವಶ್ಯವಿರುತ್ತದೆ ಎಂದು ಅಧಿಕಾರಿಗಳ ಸಮಿತಿ ವರದಿ ನೀಡಿರುತ್ತದೆ. ಅದರಂತೆ, "ಪೀಣ್ಯ ಕೈಗಾರಿಕಾ ಟೌನ್ ಶಿಪ್ ಪ್ರಾಧಿಕಾರ" ಸ್ಥಾಪಿಸಲು ಮುನ್ಸಿಪಲ್ ಕಾಯ್ದೆ / ಬಿಬಿಎಂಪಿ ಕಾಯ್ದೆಗೆ ತಿದ್ದುಪಡಿ ಮಾಡುವ ಪ್ರಸ್ತಾವನೆಯನ್ನು ದಿ: 10.03.2022 ರಂದು ನಗರಾಭಿವೃದ್ಧಿ ಇಲಾಖೆಗೆ ಸಲ್ಲಿಸಲಾಗಿರುತ್ತದೆ. ಆದ್ದರಿಂದ, |

| | | |
|---|---|---|
| | | ನಗರಾಭಿವೃದ್ಧಿ ಇಲಾಖೆಯು ಮುನ್ಸಿಪಲ್ ಕಾಯ್ದೆ / ಬಿಬಿಎಂಪಿ ಕಾಯ್ದೆಗೆ ತಿದ್ದುಪಡಿ ಆದೇಶ ಹೊರಡಿಸಿದ ನಂತರ ಪೀಣ್ಯದಲ್ಲಿ ಕೈಗಾರಿಕಾ ಟೌನ್ ಶಿಪ್ ಪ್ರಾಧಿಕಾರ ಸ್ಥಾಪಿಸುವ ಕುರಿತು ನಿಯಮಾನುಸಾರ ಮುಂದಿನ ಅಗತ್ಯ ಕ್ರಮಗಳನ್ನು ವಹಿಸಲಾಗುವುದು. |

ಸಿಐ 53 ಸಿಎಸ್‌ಸಿ 2024

**(ಶರಣಬಸಪ್ಪ ದರ್ಶನಾಪೂರ)**
ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ
ಉದ್ದಿಮೆಗಳ ಸಚಿವರು